Sagar	55,000.00
Bhadravathi	10,000.00
18. TUMKUR DISTRICT:	
Gubbi	75,000.00
Tumkur	60,000.00
Tiptur	30,000.00
Sira	30,000.00
Turvekere	20,000.00
Madhugiri	20,000.00
Kunigal	50,000-00
Koratagere	45,000.00
Chicknayakanahalli	40,000.00
19. UTTARA KANNADA DISTRICT:	
Honnavar	70,000.00
Karwar	20,000.00
Yellapur	15,000.00
Haliyal	20,000.00
Sirsi	15,000.00
Ankola	15,000.00

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಜಾಹೀರಾತುಗಳು.

459. ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ):– ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದ ಕಳೆದ ಮೂರು ತಿಂಗಳಿಂದ ಬಿಡುಗಡೆ ಮಾಡಲಾದ ಜಾಹೀರಾತುಗಳ ಸಂಖ್ಯೆ ಎಷ್ಟು ?

ಆ) ಈ ರೀತಿ ಬಿಡುಗಡೆಯಾದ ಜಾಹೀರಾತುಗಳಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಿಂದ ನೀಡಲಾದ ಕಮೀಷನ್ ಮೊತ್ತವೆಷ್ಟು ?

ಇ) ಎಷ್ಟು ಕಮೀಷನ್ ಕೊಡಲಾಗಿದೆ ಹಾಗೂ ಈ ಜಾಹೀರಾತುಗಳಿಗೆ ವೆಚ್ಚ ಮಾಡಿದ ಮೊತ್ತವೆಷ್ಟು ?

ಈ) ಈ ಜಾಹೀರಾತುಗಳನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದಲೇ ನೇರವಾಗಿ ಬಿಡುಗಡೆ ಮಾಡಲಾಗಿದೆಯೆ ಅಥವಾ ಏಜೆಂಟರ ಮೂಲಕ ಬಿಡುಗಡೆ ಮಾಡಲಾಗಿದೆಯೇ ?

ಶ್ರೀ ಭೀಮಣ್ಣಖಂಡ್ರೆ (ಸಾರಿಗೆ ಸಚಿವರು):–

ಅ) 26

ಅ) ಇಲ್ಲ

ಇ) ಜಾಹೀರಾತುಗಳ ಪ್ರಕಟಣೆಯ ವೆಚ್ಚದ ಬಾಬ್ತು ಒಟ್ಟು 3,51,130–00 ರೂ.ಗಳು

ಈ) ಜಾಹೀರಾತುಗಳನ್ನು ಸರ್ಕಾರದ ಸಾರ್ವಜನಿಕ ಉದ್ದಿಮೆಯಾದ ಮಾರ್ಕೆಟಿಂಗ್ ಕನ್ಸಲ್ಟೆಂಟ್ಸ್ ಮತ್ತು ಏಜೆನ್ಸಿ (ನಿಯಮಿತ) ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

ಪಡಿತರ ಅಂಗಡಿಗಳಿಗೆ ಕಡಿಮೆ ಗುಣಮಟ್ಟದ ಅಕ್ಕಿಯ ಸರಬರಾಜು.

460. ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ):– ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕಡಿಮೆ ಗುಣಮಟ್ಟದ ಅಕ್ಕಿಯನ್ನು ಪಡಿತರ ಅಂಗಡಿಗಳಿಗೆ ಸರಬರಾಜು ಮಾಡುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಇದರ ತಪಾಸಣೆಗಾಗಿ ಸರ್ಕಾರವು ಕ್ರಮ ಕೈಗೊಳ್ಳಲಾಗಿದೆಯೆ ?

ಇ) ರಾಜ್ಯದಲ್ಲಿ, ವ್ಯವಸ್ಥಿತವಾಗಿ ಸೀಮೆಎಣ್ಣೆ ಸರಬರಾಜು ಆಗುತ್ತಿಲ್ಲವೆಂಬುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಈ) ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ ?

ಉ) ರಾಜ್ಯದಲ್ಲಿ ಕಾಳಸಂತೆಯಲ್ಲಿ ಸೀಮೆಎಣ್ಣೆಯನ್ನು ಮಾರಾಟ ಮಾಡುತ್ತಿರುವುದರ ಬಗ್ಗೆ ತನಿಖೆ ಮಾಡಲು ಕ್ರಮ ತೆಗೆದುಕೊಳ್ಳಲಾಗಿದೆಯೇ ?

ಶ್ರೀಮತಿ ಮನೋರಮಾ ಮಧ್ವರಾಜ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):–

ಅ) ಹೌದು

ಆ) ಸಾರ್ವಜನಿಕ ವಿತರಣಾ ವ್ಯವಸ್ಥೆಯಲ್ಲಿ ವಿತರಣೆಗಾಗಿ ಒಳ್ಳೆಯ ಗುಣಮಟ್ಟದ ಅಕ್ಕಿಯನ್ನು ಸರಬರಾಜು ಮಾಡಲು ಭಾರತ ಆಹಾರ ನಿಗಮವನ್ನು ಕೋರಲಾಗುತ್ತಿದೆ. ಕೆಲವೊಮ್ಮೆ ಪಂಜಾಬ್ ರಾಜ್ಯದ ಕಡಿಮೆ ಗುಣಮಟ್ಟದ ಅಕ್ಕಿಯನ್ನು ಹಂಚಿಕೆ ಮಾಡುತ್ತಿದ್ದು ಇದು ಈಗ ಉಪಯೋಗಕ್ಕೆ ಯೋಗ್ಯವಾಗಿರುವುದಿಲ್ಲ. ಇಂತಹದನ್ನು ಅಂಗೀಕರಿಸದೇ ಹಿಂದಿರುಗಿಸಿ ಒಳ್ಳೆಯ ಗುಣಮಟ್ಟದ ಅಕ್ಕಿಯನ್ನು ಭಾರತ ಆಹಾರ ನಿಗಮದಿಂದ ಪಡೆಯಲಾಗುತ್ತಿದೆ.

ಇ) ಪಡಿತರ ಚೀಟಿದಾರರಿಗೆ ಸೀಮೆಎಣ್ಣೆಯನ್ನು ಹಾಕರ್ ಹಾಗೂ ನ್ಯಾಯಬೆಲೆ ಅಂಗಡಿಗಳ ಮೂಲಕ ವ್ಯವಸ್ಥಿತ ರೀತಿಯಲ್ಲಿ ವಿತರಿಸಲಾಗುತ್ತಿದೆ.

ಈ) ಪ್ರಶ್ನೆ (ಇ) ಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಸೀಮೆಎಣ್ಣೆ ಸಗಟು ಹಾಗೂ ಚಿಲ್ಲರೆ ವಿತರಕರುಗಳನ್ನು ನಿಯತವಾಗಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ತಪಾಸಣಾ ಸಿಬ್ಬಂದಿಯಿಂದ ಪರೀಕ್ಷಿಸಲಾಗುತ್ತಿದೆ. ತಪ್ಪಿತಸ್ಥ ವ್ಯಾಪಾರಿಗಳ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆಯಡಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ರಸ್ತೆಯ ಮೇಲೆ ಓಡಾಡುತ್ತಿರುವ ಬಸ್ಸುಗಳ ಸಂಖ್ಯೆ.

313. ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ):– ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ರಾಜ್ಯದಲ್ಲಿ ರಸ್ತೆಯ ಮೇಲೆ ಓಡಾಡುತ್ತಿರುವ ಬಸ್ಸುಗಳು ಎಷ್ಟು ಹಾಗೂ ಕೆಟ್ಟು ನಿಂತಿರುವ ಬಸ್ಸುಗಳು ಎಷ್ಟು ?

2) ಹೊಸದಾಗಿ ಬಸ್‌ಗಳನ್ನು ಖರೀದಿಸಲು ಸರ್ಕಾರ ನಿರ್ಧರಿಸಿರುವುದೇ ?

ಶ್ರೀ ಭೀಮಣ್ಣಖಂಡ್ರೆ (ಸಾರಿಗೆ ಸಚಿವರು):–

1) ರಸ್ತೆಯ ಮೇಲೆ ಓಡಾಡುತ್ತಿರುವ ಬಸ್ಸುಗಳು – 8581
ಕೆಟ್ಟು ನಿಂತಿರುವ ಬಸ್ಸುಗಳು – 759

2) – ಹೌದು –

ರಾಜ್ಯದಲ್ಲಿ ಜನಸಾಮಾನ್ಯರಿಗೆ ಸೀಮೆಎಣ್ಣೆ ಹೆಚ್ಚಾಗಿ ದೊರಕಿಸುವ ಬಗ್ಗೆ.

315. ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ):– ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ರಾಜ್ಯದಲ್ಲಿ ಜನಸಾಮಾನ್ಯರಿಗೆ ಸೀಮೆಎಣ್ಣೆ ಧಾರಾಳವಾಗಿ ದೊರೆಯಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ?

ಶ್ರೀಮತಿ ಮನೋರಮಾ ಮಧ್ವರಾಜ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):–

1) ರಾಜ್ಯದ ಪಡಿತರ ಚೀಟಿದಾರರಿಗೆ ವಿತರಿಸಲು ಪ್ರತಿ ಮಾಹೆಗೆ 67,000 ಕೆ.ಎಲ್. ಅಗತ್ಯವಿದೆ. ಆದರೆ ಕೇಂದ್ರ ಸರ್ಕಾರವು ಕೇವಲ 47,513 ಕೆ.ಎಲ್. ಮಾತ್ರ ಬಿಡುಗಡೆ ಮಾಡುತ್ತಿರುವುದರಿಂದ ಜನಸಾಮಾನ್ಯರಿಗೆ ಹೆಚ್ಚಿನ ಪ್ರಮಾಣದ ಸೀಮೆಎಣ್ಣೆ ವಿತರಿಸಲು ಸಾಧ್ಯವಾಗುತ್ತಿಲ್ಲ. ಕೇಂದ್ರ ಸರ್ಕಾರವು ನೀಡುತ್ತಿರುವ ಹಂಚಿಕೆಯಲ್ಲಿ ಈ ಕೆಳಗಿನ ಪ್ರಮಾಣದಲ್ಲಿ ವಿತರಿಸಲಾಗುತ್ತಿದೆ:–

1) ರಾಜ್ಯದ ಅನೌಪಚಾರಿಕ ಪಡಿತರ ಪ್ರದೇಶಗಳಲ್ಲಿ : 14 ಲೀಟರ್‌ನಂತೆ ಪ್ರತಿ ಕಾರ್ಡಿಗೆ
2) ಪಟ್ಟಣ ಪ್ರದೇಶಗಳಲ್ಲಿ : 8 ಲೀಟರ್‌ನಂತೆ ಪ್ರತಿ ಕಾರ್ಡಿಗೆ
3) ಗ್ರಾಮಾಂತರ ಪ್ರದೇಶದ ಕಾರ್ಡುದಾರರಿಗೆ : 4 ಲೀಟರ್‌ನಂತೆ ಪ್ರತಿ ಕಾರ್ಡಿಗೆ

ಅಲ್ಲದೇ ಹೆಚ್ಚಿನ ಪ್ರಮಾಣದ ಹಂಚಿಕೆ ಮಾಡಲು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ.

ರಾಜ್ಯದಲ್ಲಿ ಪಡಿತರ ಚೀಟಿ ಹೊಂದಿದವರ ಸಂಖ್ಯೆ.

317. ಶ್ರೀ ವಾಟಾಳ್ ನಾಗರಾಜ್ (ಚಾಮರಾಜ ನಗರ):– ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕರ್ನಾಟಕ ರಾಜ್ಯದಲ್ಲಿ ಪಡಿತರ ಚೀಟಿ ಹೊಂದಿರುವವರ ಸಂಖ್ಯೆ ಎಷ್ಟು ?

ಶ್ರೀಮತಿ ಮನೋರಮಾ ಮಧ್ವರಾಜ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):–

ಅ) 82,35,428

ನ್ಯಾಯಬೆಲೆ ಅಂಗಡಿಗಳ ಆಹಾರ ಪದಾರ್ಥಗಳ ಸಮರ್ಪಕ ಹಂಚಿಕೆಯ ಬಗ್ಗೆ ಸಮಿತಿಗಳ ರಚನೆ.

316. ಶ್ರೀ ವಾಟಾಳ್ ನಾಗರಾಜ್ (ಚಾಮರಾಜ ನಗರ):– ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ನ್ಯಾಯಬೆಲೆ ಅಂಗಡಿಗಳ ಆಹಾರ ಪದಾರ್ಥಗಳ ಸಮರ್ಪಕ ಹಂಚಿಕೆ ವ್ಯವಸ್ಥೆಗೆ ಸಲಹಾ ಸಮಿತಿಗಳನ್ನು ರಚಿಸಲು ಸರ್ಕಾರವು ನಿರ್ಧರಿಸಿದೆಯೇ ?

ಶ್ರೀಮತಿ ಮನೋರಮಾ ಮಧ್ವರಾಜ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):–

– ಹೌದು –

ಬೈಲಹೊಂಗಲ ತಾಲ್ಲೂಕಿನಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ಸು ಷೆಲ್ಟರ್ಸ್.

320. ಶ್ರೀ. ಶಿವಾನಂದ ಹೆಚ್. ಕೌಜಲಗಿ (ಬೈಲ ಹೊಂಗಲ):– ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕೆಂಗಾನೂರು ಸಂಗೊಳ್ಳಿ ಮತ್ತು ಸೌದತ್ತಿ ತಾಲ್ಲೂಕಿನ ಸುತ್ತಗಟ್ಟಿ ಮತ್ತು ಹಿಟ್ಟಣಗಿ ಗ್ರಾಮಗಳಲ್ಲಿ ಬಸ್ ಶೆಲ್ಟರ್ ಇಲ್ಲದೇ ಇರುವುದರಿಂದ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದವರ ಗಮನಕ್ಕೆ ಬಂದಿದೆಯೇ ?

2) ಹಾಗಿದ್ದಲ್ಲಿ ಕೆ.ಎಸ್.ಆರ್.ಟಿ.ಸಿ. ಮಾರ್ಗ ತಂಗುದಾಣವನ್ನು (ಚಿಕ್ಕದಾದ ವೇ ಬಸ್ ಶೆಲ್ಟರ್) ಆ ಸ್ಥಳಗಳಲ್ಲಿ ಕಟ್ಟುವ ಬಗ್ಗೆ ಕ್ರಮ ಕೈಗೊಳ್ಳುವರೆ ?

ಶ್ರೀ ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು):–

1) – ಹೌದು –

2) ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಬೈಲಹೊಂಗಲ ಕೆ.ಎಸ್.ಆರ್.ಟಿ.ಸಿ. ಡಿಪೋನಿಂದ ಬೆಳಗಾವಿಗೆ ಸೂಪರ್ ಡಿಲಕ್ಸ್ ಸಾರಿಗೆ ಸಂಚಾರವನ್ನು ಪ್ರಾರಂಭಿಸುವುದು.

321. ಶ್ರೀ. ಶಿವಾನಂದ ಎಚ್. ಕೌಜಲಗಿ (ಬೈಲಹೊಂಗಲ):– ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

ಅ) ಬೈಲಹೊಂಗಲ ಕೆ.ಎಸ್.ಆರ್.ಟಿ.ಸಿ. ಡಿಪೋನಿಂದ ಬೆಳಗಾಂಗೆ ಸೂಪರ್ ಡಿಲಕ್ಸ್ ಸಾರಿಗೆ ಸಂಚಾರವನ್ನು ಕೈಗೊಳ್ಳಲು ಸರ್ಕಾರದವರು ಕ್ರಮ ಕೈಗೊಳ್ಳುವರೆ ?

ಆ) ಬೆಳಗಾವಿ ಜಿಲ್ಲೆ ಹೆಡ್‌ಕ್ವಾರ್ಟರ್ಸ್ ಇದ್ದು ಪ್ರತಿದಿವಸ ಪ್ರವಾಸಿಗರು ಬೈಲಹೊಂಗಲದಿಂದ ಬೆಳಗಾಂಗೆ ಹೋಗುತ್ತಿದ್ದು ಈಗ ಅವರಿಗೆ ಕೇವಲ ರೆಗ್ಯುಲರ್ ಬಸ್‌ಗಳಿದ್ದು ಸೂಪರ್ ಡಿಲಕ್ಸ್ ಬಸ್‌ಗಳು ಇಲ್ಲದೇ ಇರುವುದರಿಂದ ಅವುಗಳನ್ನು ಸಂಚಾರಕ್ಕೆ ಬಿಡಲು ಕ್ರಮ ಕೈಗೊಳ್ಳುವರೆ ?

ಶ್ರೀ ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು):–

ಅ) – ಇಲ್ಲ –

ಆ) ಉದ್ಭವಿಸುವುದಿಲ್ಲ.

ವಿಶ್ವವಿದ್ಯಾನಿಲಯಗಳಲ್ಲಿ ಕಾಲೇಜು ಮಟ್ಟದಲ್ಲಿಯೇ ಪರೀಕ್ಷೆಗಳನ್ನು ನಡೆಸುವ ಬಗ್ಗೆ.

322. ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ):– ಮಾನ್ಯ ಶಿಕ್ಷಣ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರು ವಿಶ್ವವಿದ್ಯಾಲಯದವರು ಪರೀಕ್ಷೆಗಳನ್ನು ಪ್ರತಿಯೊಂದು ಕಾಲೇಜು ಮಟ್ಟದಲ್ಲಿಯೇ ನಡೆಸಬೇಕೆಂದು ತೆಗೆದುಕೊಂಡ ನಿರ್ಣಯವು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ರಾಜ್ಯದಲ್ಲಿ ಯಾವ್ಯಾವ ವಿಶ್ವವಿದ್ಯಾಲಯಗಳು ಕಾಲೇಜು ಮಟ್ಟದಲ್ಲಿ ಪರೀಕ್ಷೆಗಳನ್ನು ನಡೆಸಬೇಕೆಂದು ತೀರ್ಮಾನಿಸಿವೆ ?

ಇ) ಕಾಲೇಜು ಮಟ್ಟದಲ್ಲಿ ಪರೀಕ್ಷೆಗಳನ್ನು ನಡೆಸುವುದರಿಂದ ವಿದ್ಯಾರ್ಥಿಗಳ ಗುಣಮಟ್ಟ ಕಡಿಮೆ ಆಗುವ ಸಂಗತಿ ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಈ) ಹಾಗಿದ್ದಲ್ಲಿ, ಮೊದಲಿನಂತೆ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ವಿಶ್ವವಿದ್ಯಾಲಯದವರೇ ಪರೀಕ್ಷೆಗಳನ್ನು ನಡೆಸಲು ಸರ್ಕಾರದವರು ಆದೇಶ ನೀಡುವರೆ ?

ಶ್ರೀ ಎಸ್. ಎಂ. ಯಾಹ್ಯಾ (ಶಿಕ್ಷಣ ಮತ್ತು ವಕ್ಫ್ ಸಚಿವರು):–

ಅ) ದಿನಾಂಕ 2–11–92ರ ಬೆಂಗಳೂರು ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ 1976ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮದ 12 (5) ನೇ ಪ್ರಕರಣದಲ್ಲಿ ನಿಹಿತವಾದ ಅಧಿಕಾರಗಳನ್ನು ಚಲಾಯಿಸಿ ಉಪಕುಲಪತಿಗಳ ಅನುಮೋದನೆ ಪಡೆದು ಬಿ.ಎ: ಬಿ.ಎಸ್ಸಿ: ಬಿ.ಕಾಂ ಮೊದಲನೆ ವಾರ್ಷಿಕ ಪರೀಕ್ಷೆಗಳನ್ನು ಅನುಕ್ರಮವಾಗಿ ಕಾಲೇಜಿನ ಮಟ್ಟದಲ್ಲೇ ನಡೆಸಲು ರೆಗ್ಯುಲೇಷನ್‌ನನ್ನು ತಿದ್ದುಪಡಿ ಮಾಡಲಾಗಿತ್ತು.

ಮೇಲ್ಕಂಡ ಅಧಿಸೂಚನೆಯನ್ನು ಅಬೆಯನ್ಸ್‌ನಲ್ಲಿ ಇಡಲಾಗಿದ್ದು, ಕಾಲೇಜು ಮಟ್ಟದಲ್ಲಿ ಪರೀಕ್ಷೆಗಳನ್ನು ನಡೆಸುವ ಪ್ರಸ್ತಾವವನ್ನು ಮುಂದೂಡಲಾಗಿದೆ.

ಆ) ಯಾವುದೂ ಇಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ತ್ರಿವರ್ಣ ಹಾಗೂ ಕೇಸರಿ ಕಾರ್ಡುಗಳ ಸಂಖ್ಯೆ.

677. ಶ್ರೀ ಮಂಜುನಾಥ ಕುನ್ನೂರ, (ಶಿಗ್ಗಾಂವ):– ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ರಾಜ್ಯದಲ್ಲಿ ಇದುವರೆವಿಗೆ ವಿತರಿಸಲಾಗಿರುವ ತ್ರಿವರ್ಣ ಹಾಗೂ ಕೇಸರಿ ಕಾರ್ಡುಗಳ ಸಂಖ್ಯೆ ಎಷ್ಟು ?

2) ಇನ್ನೂ ಎಷ್ಟು ಜನರಿಗೆ ಈ ಕಾರ್ಡುಗಳನ್ನು ವಿತರಿಸಬೇಕಾಗಿದೆ, ಹಾಗೂ ವಿಳಂಬಕ್ಕೆ ಕಾರಣಗಳೇನು ?

3) ಈ ಸೌಲಭ್ಯವು ಎಲ್ಲರಿಗೂ ಸಿಗುವಂತಾಗಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

ಶ್ರೀಮತಿ ಮನೋರಮಾ ಮಧ್ವರಾಜ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):–

1) ತ್ರಿವರ್ಣ ಪಡಿತರ ಚೀಟಿಗಳು – 12,98,059
ಕೇಸರಿ ಪಡಿತರ ಚೀಟಿಗಳು – 27,61,832

2) ತ್ರಿವರ್ಣ ಪಡಿತರ ಚೀಟಿಗಳ ಪುನರ್ ಸಮೀಕ್ಷೆ ಕಾರ್ಯ ಮಂಡ್ಯ, ತುಮಕೂರು, ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಸಂಪೂರ್ಣವಾಗಿ ಮುಗಿದಿರುವುದಿಲ್ಲ. ಈವರೆವಿಗೆ ಸಮೀಕ್ಷೆ ಮುಗಿದಿರುವ ಇತರೆ ಎಲ್ಲಾ ಜಿಲ್ಲೆಗಳಲ್ಲಿ 39,94,252 ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ, ಹಾಗೂ 26,96,193 ಫಲಾನುಭವಿಗಳಿಗೆ ತ್ರಿವರ್ಣ ಪಡಿತರ ಚೀಟಿಗಳನ್ನು ನೀಡಬೇಕಾಗಿರುತ್ತದೆ. ಸಮೀಕ್ಷೆ ಕಾರ್ಯ ಹಾಗೂ ಪಡಿತರ ಚೀಟಿಗಳ ವಿತರಣಾ ಕಾರ್ಯವು ಚುರುಕುಗೊಳಿಸಲು ಸೂಕ್ತ ನಿರ್ದೇಶನ ನೀಡಲಾಗಿದೆ. ಈ ಮಾಸಾಂತ್ಯದೊಳಗೆ ಎಲ್ಲಾ ಅರ್ಹ ಫಲಾನುಭವಿಗಳಿಗೆ ತ್ರಿವರ್ಣ ಪಡಿತರ ಚೀಟಿಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

3) ಸಮೀಕ್ಷೆ ಕಾರ್ಯ ತುರ್ತಾಗಿ ನಡೆಸಲು ಹಾಗೂ ಕಂದಾಯ ಇಲಾಖೆ ನೌಕರರು ಅಸಹಕಾರ ನೀಡಿದ್ದಲ್ಲಿ ಅಂತಹ ಸ್ಥಳಗಳಲ್ಲಿ ಶಾಲಾ ಉಪಾಧ್ಯಾಯರುಗಳನ್ನು ನೇಮಿಸಿಕೊಂಡು ಸಮೀಕ್ಷೆ ಕಾರ್ಯ ಹಾಗೂ ಪಡಿತರ ಚೀಟಿ ವಿತರಣೆ ಕಾರ್ಯಗಳನ್ನು ಮುಗಿಸುವಂತೆ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೂ ಅಗತ್ಯ ಸೂಚನೆ ನೀಡಲಾಗಿದೆ.

ಶಿಗ್ಗಾಂವ ಬಸ್ ಸ್ಟಾಂಡ್ ಸವಣೂರು ಬಸ್ ಡಿಪೋ ಜಮೀನನ್ನು ಕೆಎಸ್.ಆರ್.ಟಿ.ಸಿ.ಯವರು ವಶಪಡಿಸಿಕೊಂಡಿದ್ದರ ಬಗ್ಗೆ

689. ಶ್ರೀ ಮಂಜುನಾಥ ಸಿ. ಕುನ್ನೂರ (ಶಿಗ್ಗಾಂವ):– ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಶಿಗ್ಗಾಂವ ಬಸ್ ಸ್ಟಾಂಡ್ ಹಾಗೂ ಸವಣೂರು ಬಸ್ ಡಿಪೋ ಜಮೀನನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯವರು ವಶಪಡಿಸಿಕೊಂಡಿದ್ದಾರೆಯೇ ?

ಆ) ಹಾಗಿದ್ದಲ್ಲಿ, ಇನ್ನೂ ಎಷ್ಟು ದಿನಗಳಲ್ಲಿ ಅವುಗಳನ್ನು ಪ್ರಾರಂಭಿಸಲಾಗುವುದು ?

ಶ್ರೀ ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು):–

ಅ) ಶಿಗ್ಗಾಂವ ಬಸ್ ಸ್ಟ್ಯಾಂಡಿಗೆ ಜಮೀನನ್ನು ಇನ್ನೂ ವಶಪಡಿಸಿಕೊಂಡಿಲ್ಲ. ಆದರೆ ಬಸ್ ಡಿಪೋ ನಿರ್ಮಾಣಕ್ಕೋಸ್ಕರ ಸವಣೂರಲ್ಲಿ ನಿವೇಶನವನ್ನು ದಿನಾಂಕ:29–7–92ರಂದು ಸಂಸ್ಥೆಯ ವಶಕ್ಕೆ ಪಡೆಯಲಾಗಿದೆ.

ಆ) ಶಿಗ್ಗಾಂವದಲ್ಲಿ ಬಸ್ ನಿಲ್ದಾಣಕ್ಕೋಸ್ಕರ ಜಮೀನನ್ನು ಸಂಸ್ಥೆಯ ವಶಕ್ಕೆ ಪಡೆದ ನಂತರ ನಿರ್ಮಾಣದ ಕಾರ್ಯವನ್ನು ಯೋಜಿಸಲಾಗುವುದು. ಸವಣೂರಿನಲ್ಲಿ ಬಸ್ ಡಿಪೋದ ನಿರ್ಮಾಣ ಮಾಡುವ ಕಾರ್ಯವನ್ನು ಸಾಧ್ಯವಾದಷ್ಟು ಬೇಗ ಪ್ರಾರಂಭಿಸಲಾಗುವುದು.